ಕರ್ನಾಟಕ ಸರ್ಕಾರ

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

**ರಾಜ್ಯ ನೀರು ಮತ್ತು ನೈರ್ಮಲ್ಯ ಮಿಷನ್**

**ಸಂವಹನ ಮತ್ತು ಸಾಮರ್ಥ್ಯ ಅಭಿವೃದ್ಧಿ ಘಟಕ**

ಸಂಖ್ಯೆ : ಗ್ರಾಅಪ/ರಾನೀನೈಮಿ/ಎನ್‌ಬಿಎ/ ಸಿ.ಇ.ಓ-14/2012-13/613 ದಿನಾಂಕ :25.02.2014

**ರವರಿಗೆ,**

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು

ಎಲ್ಲಾ ಜಿಲ್ಲಾ ಪಂಚಾಯತ್.

**ಮಾನ್ಯರೆ,**

**ವಿಷಯ:** ನೈರ್ಮಲ್ಯ ಕುರಿತು ಸನ್ಮಾನ್ಯ ಮುಖ್ಯ ಮಂತ್ರಿಗಳು ಮತ್ತು ಸನ್ಮಾನ್ಯ ಗ್ರಾಮೀಣಾಭಿವೃದ್ಧಿ ಸಚಿವರು ನೀಡಿರುವ ಸಂದೇಶವನ್ನೊಳಗೊಂಡ ಪತ್ರವನ್ನು ಚುನಾಯಿತ ಪ್ರತಿನಿಧಿಗಳಿಗೆ ತಲುಪಿಸುವ ಕುರಿತು.

-----

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ ಗ್ರಾಮ ಪಂಚಾಯಿತಿ, ತಾಲೂಕು ಪಂಚಾಯಿತಿ ಮತ್ತು ಜಿಲ್ಲಾ ಪಂಚಾಯಿತಿ ಎಲ್ಲಾ ಮೂರುಹಂತದ ಪಂಚಾಯಿತ ಪ್ರತಿನಿಧಿಗಳು, ನಿರ್ಮಲ ಭಾರತ ಅಭಿಯಾನ ಕಾರ್ಯಕ್ರಮ ಅನುಷ್ಟಾನದಲ್ಲಿ ಸಕ್ರಿಯವಾಗಿ ಭಾಗವಹಿಸಿ, ತಮ್ಮ ಕ್ಷೇತ್ರ ವ್ಯಾಪ್ತಿಯಲ್ಲಿ ಬರುವ ಎಲ್ಲಾ ವಾರ್ಡ್, ಎಲ್ಲಾ ಗ್ರಾಮಗಳನ್ನೊಳಗೊಂಡಂತೆ ಗ್ರಾಮ ಪಂಚಾಯಿತಿಗಳಲ್ಲಿ ಬಯಲು ಬಹಿರ್ದೇಸೆ ಪದ್ಧತಿಯನ್ನು ತೊಡೆದು ಹಾಕಿ, ಇಡೀ **'ಕರ್ನಾಟಕವನ್ನು ಬಯಲು ಶೌಚ ಮುಕ್ತ'** ರಾಜ್ಯವನ್ನಾಗಿ ಮಾಡಲು ಸನ್ಮಾನ್ಯ ಮುಖ್ಯಮಂತ್ರಿಗಳು ಹಾಗೂ ಸನ್ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಚುನಾಯಿತ ಪ್ರತಿನಿಧಿಗಳಲ್ಲಿ ಮನವಿ ಮಾಡಿರುತ್ತಾರೆ.

ಈ ಮನವಿ ಪತ್ರಗಳನ್ನು ಹೊಂದಿರುವ ಬಂಡಲುಗಳನ್ನು ವಿ.ಆರ್.ಎಲ್ ಪಾರ್ಸಲ್ ಮೂಲಕ ತಮ್ಮ ಜಿಲ್ಲಾ ಪಂಚಾಯತ್ ಕಚೇರಿಗೆ ಕಳುಹಿಸಲಾಗಿದ್ದು, ಜಿಲ್ಲಾ ಎನ್.ಬಿ.ಎ ನೋಡಲ್ ಅಧಿಕಾರಿಗಳು ಜಿಲ್ಲಾ ಪಂಚಾಯಿತಿಯ ಎಲ್ಲಾ ಚುನಾಯಿತಿ ಪ್ರತಿನಿದಿಗಳಿಗೆ ಈ ಮನವಿ ಪತ್ರಗಳನ್ನು ತಲುಪಿಸಬೇಕು ಹಾಗೂ ತಾಲೂಕು ಕಾರ್ಯನಿರ್ವಾಹಕ ಅಧಿಕಾರಿಗಳು ಎಲ್ಲಾ ತಾಲೂಕು ಹಂತದ ಚುನಾಯಿತ ಪ್ರತಿನಿಧಿಗಳಿಗೆ ಹಾಗೂ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ಮೂಲಕ ಗ್ರಾಮ ಪಂಚಾಯಿತಿಯ ಎಲ್ಲಾ ಚುನಾಯಿತ ಪ್ರತಿನಿಧಿಗಳಿಗೆ ಮುದ್ದಾಂ ತಲುಪಿಸಿ, ಎಲ್ಲಾ ಹಂತದ ಚುನಾಯಿತಿ ಪ್ರತಿನಿದಿಗಳಿಗೆ ಈ ಮನವಿ ಪತ್ರಗಳನ್ನು ತಲುಪಿಸಿರುವ ಬಗ್ಗೆ ದೃಢಿಕರಣ ಪಡೆದು ರಾಜ್ಯ ಕಚೇರಿಗೆ ದಿನಾಂಕ **7-2.-2014ರ** ಒಳಗಗಾಗಿ ವರದಿ ಸಲ್ಲಿಸಲು ಸೂಚಿಸಿದೆ.

ತಮ್ಮ ವಿಶ್ವಾಸಿ

for ಮಿಷನ್ ನಿರ್ದೇಶಕರು

ರಾಜ್ಯ ನೀರು & ನೈರ್ಮಲ್ಯ ಮಿಷನ್ ಹಾಗೂ

ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿಗಳು

ಗ್ರಾ ಅ ಮತ್ತು ಪಂಚಾಯತ್ ರಾಜ್ ಇಲಾಖೆ

**ಪ್ರತಿಯನ್ನು:-**

1. ಅಪರ ಮುಖ್ಯ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತಕಾರ್ಯದರ್ಶಿಯವರ ಮಾಹಿತಿಗಾಗಿ.

2ನೇ ಮಹಡಿ, ಕೆ.ಹೆಚ್.ಬಿ. ಬಿಲ್ಡಿಂಗ್, ಕಾವೇರಿಭವನ, ಬೆಂಗಳೂರು - 560 009.

ದೂರವಾಣಿ ಸಂ.22221861-62 : - ಫ್ಯಾಕ್ಸ್ :-22221862 E-mail : wsrdpr@gmail.com.